ದಿನಾಂಕಃ 28-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ</u>- 2 ನೇ ಎದುರುದಾರರ ಪರವಾಗಿ ಶ್ರೀ.ಎನ್.ವಿ.ಎನ್. ವಕೀಲರಿಂದಃ-**

ಈ ಅಪಘಾತವನ್ನು ನಾನು ಕಣ್ಣಾರೆ ನೋಡಿರುವುದಿಲ್ಲ. ಆ ದಿನ ನನ್ನ ಗಂಡ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನ ನಮ್ಮ ಪಕ್ಕದ ಮನೆಯವರಾದ ಗೋವಿಂದರಾಜುರವರಿಗೆ ಸೇರಿದ್ದಾಗಿರುತ್ತದೆ. ನನ್ನ ಗಂಡನಿಗೆ ದ್ವಿಚಕ್ರ ವಾಹನ ಓಡಿಸಲು ಡಿ.ಎಲ್. ಇರಲಿಲ್ಲ ಎಂದರೆ ಸರಿಯಲ್ಲ. ನಮ್ಮ ಮನೆಯಿಂದ ನಮ್ಮ ತೋಟ ಒಂದೂವರೆ ಮೈಲಿ ದೂರದಲ್ಲಿದೆ. ಆ ದಿನ ನನ್ನ ಗಂಡ ಹೆಲ್ಮೆಟ್ ಹಾಕದೇ ಮತ್ತು ಡಿ.ಎಲ್. ಇಲ್ಲದೇ ವಾಹನ ಚಲಾಯಿಸಿಕೊಂಡು ಬರುತ್ತಿದ್ದಾಗ ಯಾವುದೋ ಒಂದು ಅಪರಿಚಿತ ವಾಹನ ಡಿಕ್ಕಿಪಡಿಸಿರುತ್ತದೆ ಎಂದರೆ ಸರಿಯಲ್ಲ. ಈ ಅಪಘಾತದ ಬಗ್ಗೆ ನನಗೆ ಉಮೇಶ್ ಎಂಬುವವರು ಮಾಹಿತಿ ನೀಡಿದರು. ಅಪಘಾತವಾದ ನಂತರ ನನ್ನ ಗಂಡನನ್ನು ಮಧುಗಿರಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋದೆವು. ಈ ಅಪಘಾತದ ಬಗ್ಗೆ ನನ್ನ ಗಂಡ ವೈದ್ಯರ ಮುಂದೆ ಹೇಳಿಕೆ ನೀಡಿರುತ್ತಾರೆ. ಈ ಅಪಘಾತ ನನ್ನ ಗಂಡನ ತಪ್ಪಿನಿಂದ ಆಗಿದ್ದು, 1 ನೇ ಎದುರುದಾರರ ವಾಹನದ ತಪ್ಪಿನಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರರ ಗಾಡಿಯನ್ನು ಚಲಾಯಿಸುತ್ತಿದ್ದ ಗಂಗಾರಾಜುರವರ ಪರಿಚಯ ನನಗೆ ಇದೆ ಎಂದರೆ ಸರಿಯಲ್ಲ. ಅಪಘಾತವಾದ ಕಾಲಕ್ಕೆ ನನ್ನ ಗಂಡನಿಗೆ 65 ವರ್ಷ ವಯಸ್ಸಾಗಿತ್ತು ಎಂದರೆ

ಸರಿಯಲ್ಲ. ನನ್ನ ಗಂಡ ವ್ಯವಸಾಯ ಮತ್ತು ಹೈನುಗಾರಿಕೆಯಿಂದ ತಿಂಗಳಿಗೆ ರೂ.30,000/- ಸಂಪಾದಿಸುತ್ತಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ಮತ್ತು 3 ನೇ ಅರ್ಜಿದಾರರು ವ್ಯವಸಾಯ ಮಾಡುತ್ತಾರೆ. ನೇತ್ರಾವತಿ 2 ನೇ ಅರ್ಜಿದಾರರ ಹೆಂಡತಿ ಆಗಿರುತ್ತಾರೆ. ಈ ಅಪಘಾತ 1 ನೇ ಎದುರುದಾರರ ವಾಹನದ ಚಾಲಕನ ತಪ್ಪಿನಿಂದ ಆಗದೇ ಇದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಅರ್ಜಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ